# Akashvani : Bangalore
# National Bulletin In Kannada
# ಆಕಾಶವಾಣಿ, ಬೆಂಗಳೂರು
# ರಾಷ್ಟ್ರೀಯ ವಾರ್ತೆಗಳು

17.03.2025 19.35hrs

*******************

ಮುಖ್ಯಾಂಶಗಳು

1. ರಕ್ಷಣೆ ಸೇರಿದಂತೆ ಪ್ರಮುಖ ವಲಯಗಳಲ್ಲಿ ಐದು ಒಪ್ಪಂದಗಳಿಗೆ ಭಾರತ–ನ್ಯೂಜಿಲೆಂಡ್ ಸಹಿ
2. ನವದೆಹಲಿಯಲ್ಲಿಂದು 10ನೇ ಆವೃತ್ತಿಯ ರೈಸಿನಾ ಸಂವಾದ ಉದ್ಘಾಟಿಸದ ಪ್ರಧಾನಿ ನರೇಂದ್ರ ಮೋದಿ
3. ಕಳೆದ 10 ವರ್ಷದಲ್ಲಿ ರೈಲ್ವೆಯಲ್ಲಿ 5 ಲಕ್ಷ ಉದ್ಯೋಗ ಸೃಷ್ಟಿ – ರೈಲ್ವೆ ಸಚಿವ ಅಶ್ವಿನಿ ವೈಷ್ಣವ್
4. ಕಬ್ಬಡ್ಡಿ ವಿಶ್ವಕಪ್; ಇಟಲಿ ವಿರುದ್ಧ ಭಾರತಕ್ಕೆ ಭರ್ಜರಿ ಜಯ

*******************

ಭಾರತ ಮತ್ತು ನ್ಯೂಜಿಲೆಂಡ್ ಇಂದು ರಕ್ಷಣೆ, ಕ್ರಮ ಶಿಕ್ಷಣ, ಕ್ರೀಡೆ, ತೋಟಗಾರಿಕೆ ಮತ್ತು ಅರಣ್ಯ ಕ್ಷೇತ್ರದಲ್ಲಿ ಐದು ಒಪ್ಪಂದಗಳನ್ನು ಪರಸ್ಪರ ವಿನಿಮಯ ಮಾಡಿಕೊಂಡವು.

ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿಂದು ನ್ಯೂಜಿಲೆಂಡ್ ಪ್ರಧಾನಿ ಕ್ರಿಸ್ಟೋಫರ್ ಲಕ್ಸನ್ ಅವರೊಂದಿಗೆ ಮಾತುಕತೆ ನಡೆಸಿದರು.

ನಂತರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ವಿವಿಧ ಅಂಶಗಳ ಕುರಿತು ನ್ಯೂಜಿಲೆಂಡ್ ಪ್ರಧಾನಿ ಅವರೊಂದಿಗೆ ಚರ್ಚಿಸಲಾಯಿತು. ರಕ್ಷಣಾ ಮತ್ತು ಭದ್ರತಾ ಪಾಲುದಾರಿಕೆಯನ್ನು ಬಲಪಡಿಸಲು ಉಭಯ ದೇಶಗಳು ನಿರ್ಧರಿಸಿವೆ. ಜಂಟಿ ಸಮರಾಭ್ಯಾಸ, ತರಬೇತಿ ಜೊತೆಗೆ ರಕ್ಷಣಾ ಉದ್ಯಮದಲ್ಲಿ ಪರಸ್ಪರ ಸಹಕಾರಕ್ಕಾಗಿ ಮಾರ್ಗಸೂಚಿಗಳನ್ನು ಸಿದ್ಧಪಡಿಸಲಾಗುವುದು ಎಂದು ತಿಳಿಸಿದರು.

ಕ್ರೀಡೆಯಲ್ಲಿ ಆಟಗಾರರ ತರಬೇತಿ ಮತ್ತು ವಿನಿಮಯದ ಜೊತೆಗೆ ಕ್ರೀಡಾ ವಿಜ್ಞಾನ, ಮನೋವಿಜ್ಞಾನ ಮತ್ತು ವೈದ್ಯಕೀಯ ವಿಜ್ಞಾನದಲ್ಲಿ ಪರಸ್ಪರ ಸಹಕಾರ ಬಲಪಡಿಸುವ ಕುರಿತು ಚರ್ಚೆ ನಡೆಸಲಾಯಿತು. ಮುಂದಿನ ವರ್ಷ ಎರಡು ದೇಶಗಳ ನಡುವಿನ ಕ್ರೀಡಾ ಸಂಬಂಧದ 100 ವರ್ಷಗಳನ್ನು ಆಚರಿಸಲು ನಿರ್ಧರಿಸಲಾಗಿದೆ ಎಂದು ಪ್ರಧಾನಿ ಮೋದಿ ಹೇಳಿದರು.

2019ರ ಕ್ರೈಸ್ಟ್ ಚರ್ಚ್ ಭಯೋತ್ಪಾದಕ ದಾಳಿಯಾಗಲಿ ಅಥವಾ 2008ರ ಮುಂಬೈ ದಾಳಿಯಾಗಲಿ ಯಾವುದೇ ರೀತಿಯ ಭಯೋತ್ಪಾದನೆ ಸ್ವೀಕಾರ್ಹವಲ್ಲ. ಭಯೋತ್ಪಾದಕರ ವಿರುದ್ಧ ಕಠಿಣ ಕ್ರಮ ಅಗತ್ಯ. ಭಯೋತ್ಪಾದನೆ, ಪ್ರತ್ಯೇಕವಾದಿ ಮೂಲಭೂತ ಶಕ್ತಿಗಳ ವಿರುದ್ಧ ಪರಸ್ಪರ ಸಹಕರಿಸುವುದನ್ನು ಭಾರತ ಮತ್ತು ನ್ಯೂಜಿಲೆಂಡ್ ಮುಂದುವರೆಸಲಿವೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

ಧ್ವನಿ: ಪ್ರಧಾನಮಂತ್ರಿ

*******************

ಪ್ರಧಾನಿ ನರೇಂದ್ರ ಮೋದಿ ನವದೆಹಲಿಯಲ್ಲಿಂದು 10ನೇ ಆವೃತ್ತಿಯ ರೈಸಿನಾ ಸಂವಾದ 2025 ಅನ್ನು ಉದ್ಘಾಟಿಸಲಿದ್ದಾರೆ. ನ್ಯೂಜಿಲೆಂಡ್ ಪ್ರಧಾನಿ ಕ್ರಿಸ್ಟೋಫರ್ ಲಕ್ಸನ್ ಉದ್ಘಾಟನಾ ಅಧಿವೇಶನದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದಾರೆ.

ಮೂರು ದಿನಗಳ ರೈಸಿನಾ ಸಂವಾದ ಇಂದಿನಿಂದ ಮಾರ್ಚ್ 19 ರವರೆಗೆ ನಡೆಯಲಿದೆ. ಕಾಲಚಕ್ರ – ಜನರು, ಶಾಂತಿ ಮತ್ತು ಭೂಮಿ ಎಂಬುದು ಈ ವರ್ಷದ ಸಂವಾದದ ಧ್ಯೇಯವಾಕ್ಯವಾಗಿದೆ. ಈ ಕಾರ್ಯಕ್ರಮದ ಸಂದರ್ಭದಲ್ಲಿ, ಜಾಗತಿಕ ನಾಯಕರು, ಚಿಂತಕರು ಮತ್ತಿತರರು ಹಲವು ವಿಷಯಾಧಾರಿತ ಚರ್ಚೆಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದಾರೆ.

10ನೇ ರೈಸಿನಾ ಸಂವಾದ ಸುಮಾರು 125 ದೇಶಗಳ ಪ್ರತಿನಿಧಿಗಳ ಭಾಗವಹಿಸುವಿಕೆಗೆ ಸಾಕ್ಷಿಯಾಗಿದೆ. ಸಚಿವರು, ವಿವಿಧ ರಾಷ್ಟ್ರಗಳ ಮತ್ತು ಸರ್ಕಾರಗಳ ಮಾಜಿ ಅಧ್ಯಕ್ಷರು, ಮಿಲಿಟರಿ ಕಮಾಂಡರ್‌ಗಳು, ಕೈಗಾರಿಕೋದ್ಯಮಿಗಳು, ತಂತ್ರಜ್ಞಾನ ನಾಯಕರು, ಶಿಕ್ಷಣ ತಜ್ಞರು, ಮಾಧ್ಯಮ ಪ್ರತಿನಿಧಿಗಳು ಸೇರಿದಂತೆ ಮತ್ತಿತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಾರೆ.

3 ಸಾವಿರದ 500ಕ್ಕೂ ಹೆಚ್ಚು ಜನರು ಈ ಸಂವಾದದಲ್ಲಿ ಪ್ರತ್ಯಕ್ಷವಾಗಿ ಪಾಲ್ಗೊಳ್ಳಲಿದ್ದು, ವಿಶ್ವದಾದ್ಯಂತ ಲಕ್ಷಾಂತರ ಜನರು ವಿವಿಧ ಡಿಜಿಟಲ್ ವೇದಿಕೆಗಳಲ್ಲಿ ಈ ಕಾರ್ಯಕ್ರಮವನ್ನು ವೀಕ್ಷಿಸುತ್ತಿದ್ದಾರೆ. ರೈಸಿನಾ ಸಂವಾದ ಜಾಗತಿಕ ಸಮುದಾಯ ಎದುರಿಸುತ್ತಿರುವ ಅತ್ಯಂತ ಸವಾಲಿನ ಸಮಸ್ಯೆಗಳನ್ನು ಪರಿಹರಿಸಲು ಬದ್ಧವಾಗಿರುವ ಭಾರತದ ಭೌಗೋಳಿಕ ರಾಜಕೀಯ ಮತ್ತು ಭೂ ಅರ್ಥಶಾಸ್ತ್ರದ ಪ್ರಮುಖ ಸಮ್ಮೇಳನವಾಗಿದೆ.

*******************

ರಕ್ಷಣಾ ಸಚಿವ ರಾಜನಾಥ್ ಸಿಂಗ್ ನವದೆಹಲಿಯಲ್ಲಿ ಇಂದು ಅಮೆರಿಕದ ರಾಷ್ಟ್ರೀಯ ಗುಪ್ತಚರ ನಿರ್ದೇಶಕಿ ತುಳಸಿ ಗಬ್ಬಾರ್ಡ್ ಅವರೊಂದಿಗೆ ಸಭೆ ನಡೆಸಿದರು.

ಭಾರತ–ಅಮೆರಿಕಾ ಪಾಲುದಾರಿಕೆಯನ್ನು ಮತ್ತಷ್ಟು ಗಾಢವಾಗಿಸಲು ರಕ್ಷಣೆ ಮತ್ತು ಮಾಹಿತಿ ಹಂಚಿಕೆ ಸೇರಿದಂತೆ ವ್ಯಾಪಕ ಶ್ರೇಣಿಯ ವಿಷಯಗಳ ಕುರಿತು ಉಭಯ ನಾಯಕರು ಚರ್ಚಿಸಿದರು.

ಭಾರತ ಮತ್ತು ಅಮೆರಿಕ ನಡುವಿನ ಮಿಲಿಟರಿ ಸಮರಾಭ್ಯಾಸ, ಕಾರ್ಯತಂತ್ರದ ಸಹಕಾರ, ಮಾಹಿತಿ ಹಂಚಿಕೆ, ವಿಶೇಷವಾಗಿ ಕಡಲ ಕ್ಷೇತ್ರದಲ್ಲಿ ಆಗಿರುವ ಮಹತ್ವದ ಪ್ರಗತಿಯನ್ನು ಇದೇ ವೇಳೆ ಉಭಯ ನಾಯಕರು ಪರಿಶೀಲಿಸಿದರು.

*******************

ಲೋಕಸಭೆಯಲ್ಲಿ 2025–26ನೇ ಸಾಲಿನ ರೈಲ್ವೆ ಸಚಿವಾಲಯದ ಅನುದಾನದ ಬೇಡಿಕೆ ಕುರಿತು ಚರ್ಚೆಯನ್ನು ಕೈಗೆತ್ತಿಕೊಳ್ಳಲಾಗಿದೆ.

ಚರ್ಚೆಯನ್ನು ಪ್ರಾರಂಭಿಸಿದ ಕಾಂಗ್ರೆಸ್‌ನ ವರ್ಷಾ ಗಾಯಕ್‌ವಾಡ್, ಭಾರತೀಯ ರೈಲ್ವೆಯನ್ನು ಖಾಸಗೀಕರಣಗೊಳಿಸಲು ಕೇಂದ್ರ ಸರ್ಕಾರ ಪಿತೂರಿ ನಡೆಸುತ್ತಿದೆ ಎಂದು ಆರೋಪಿಸಿದರು.

ಬಿಜೆಪಿ ಜನಾರ್ಧನ ಸಿಂಗ್ ಸಿಗ್ರಿವಾಲ್ ಮಾತನಾಡಿ, ರೈಲ್ವೆ ಮೂಲಸೌಕರ್ಯ ಮತ್ತು ಆಧುನೀಕರಣ ಹಾಗೂ ಪ್ರಯಾಣಿಕರ ಸುರಕ್ಷತೆಗಾಗಿ ಕೇಂದ್ರ ಆಯವ್ಯಯದಲ್ಲಿ 2 ಲಕ್ಷ 65 ಸಾವಿರ ಕೋಟಿ ರೂಪಾಯಿ ಹಂಚಿಕೆ ಮಾಡಲಾಗಿದೆ. ದೇಶದಲ್ಲಿ ಹೊಸದಾಗಿ 100 ಅಮೃತಭಾರತ್ ರೈಲುಗಳು, 50 ನಮೋ ಭಾರತ್ ರೈಲುಗಳು ಮತ್ತು 200 ವಂದೇ ಭಾರತ್ ರೈಲುಗಳು ಸಂಚಾರಕ್ಕೆ ಕೇಂದ್ರ ಸರ್ಕಾರ ಯೋಜನೆಗಳನ್ನು ಹೊಂದಿದೆ ಎಂದು ಹೇಳಿದರು.

ಬಿಜೆಪಿಯ ಡಾ.ರಾಜೀವ್ ಭಾರದ್ವಾಜ್ ಮಾತನಾಡಿ, ಭಾರತೀಯ ರೈಲ್ವೆ ವಿಶ್ವದ ನಾಲ್ಕನೇ ಅತಿ ದೊಡ್ಡ ಜಾಲವಾಗಿದೆ. ದೇಶದ ಆರ್ಥಿಕ ಬೆಳವಣಿಗೆಗೆ ರೈಲ್ವೆ ಪ್ರಮುಖ ಕೊಡುಗೆ ನೀಡುತ್ತಿದೆ. ಪ್ರಯಾಣಿಕರ ಸುರಕ್ಷತೆ ಮತ್ತು ಅವರ ಮೂಲಸೌಕರ್ಯಕ್ಕೆ ಕೇಂದ್ರ ಸರ್ಕಾರ ಹೆಚ್ಚಿನ ಆದ್ಯತೆ ನೀಡಿದೆ ಎಂದರು.

*******************

ಉಕ್ಕು ಮತ್ತು ಅಲ್ಯೂಮಿನಿಯಂ ಮೇಲೆ ಅಮೆರಿಕಾ ವಿಧಿಸಿರುವ ಶೇಕಡ 25 ರಷ್ಟು ಆಮದು ಸುಂಕದ ಪರಿಣಾಮವನ್ನು ಸರ್ಕಾರ ಎಚ್ಚರಿಕೆಯಿಂದ ಪರಿಶೀಲಿಸುತ್ತಿದೆ ಮತ್ತು ಮೌಲ್ಯಮಾಪನ ಮಾಡುತ್ತಿದೆ ಎಂದು ಕೇಂದ್ರ ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ ತಿಳಿಸಿದ್ದಾರೆ.

ಲೋಕಸಭೆಯಲ್ಲಿ ಪ್ರಶ್ನೋಯೊಂದಕ್ಕೆ ನೀಡಿದ ಲಿಖಿತ ಉತ್ತರದಲ್ಲಿ ಅವರು, ಔಷಧ, ಸರಕು ಮತ್ತು ಸೆಮಿಕಂಡಕ್ಟರ್ ವಲಯಗಳ ಮೇಲೆ ಆಮದು ಸುಂಕ ವಿಧಿಸುವ ಕುರಿತು ಅಮೆರಿಕಾ ಇದುವರೆಗೆ ಯಾವುದೇ ಘೋಷಣೆ ಮಾಡಿಲ್ಲ ಎಂದು ಹೇಳಿದರು.

ಇತ್ತೀಚೆಗೆ ಅಮೆರಿಕಾ ಸರ್ಕಾರ, ಭಾರತದಿಂದ ಉಕ್ಕು ಮತ್ತು ಅಲ್ಯೂಮಿನಿಯಂ ಆಮದು ಮೇಲೆ ಶೇಕಡ 25 ರಷ್ಟು ಆಮದು ಸುಂಕ ವಿಧಿಸಿದ್ದು, ಈ ತಿಂಗಳ 12 ರಿಂದ ಇದು ಜಾರಿಗೆ ಬಂದಿದೆ.

*******************

ಕಳೆದ 10 ವರ್ಷಗಳಲ್ಲಿ ಐದು ಲಕ್ಷ ಉದ್ಯೋಗಗಳನ್ನು ರೈಲ್ವೆ ಸೃಷ್ಟಿಸಿದೆ. ದೇಶದಲ್ಲಿ ರೈಲು ಅಪಘಾತಗಳನ್ನು ತಗ್ಗಿಸುವ ನಿಟ್ಟಿನಲ್ಲಿ ನಿರಂತರವಾಗಿ ಗಮನಹರಿಸಲಾಗಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

ರಾಜ್ಯಸಭೆಯಲ್ಲಿಂದು ರೈಲ್ವೆ ಸಚಿವಾಲಯದ ಕಾರ್ಯವೈಖರಿ ಕುರಿತು ನಡೆದ ಚರ್ಚೆಯಲ್ಲಿ ಉತ್ತರಿಸಿದ ಸಚಿವರು, ರೈಲ್ವೆ ಮೂಲಸೌಕರ್ಯವನ್ನು ಸುಧಾರಿಸಲು ಹಾಗೂ ಪ್ರಯಾಣಿಕರಿಗೆ ಆರಾಮದಾಯಕ ಮತ್ತು ಕೈಗೆಟುಕುವ ದರದಲ್ಲಿ ರೈಲು ಸೇವೆಯನ್ನು ಒದಗಿಸಲು ಕೇಂದ್ರ ಸರ್ಕಾರ ಅನೇಕ ಕ್ರಮಗಳನ್ನು ಕೈಗೊಂಡಿದೆ ಎಂದರು.

2020 ರಿಂದ ಪ್ರಯಾಣ ದರವನ್ನು ಹೆಚ್ಚಿಸಿಲ್ಲ. ನೆರೆಯ ದೇಶಗಳಿಗೆ ಹೋಲಿಸಿದರೆ ನಮ್ಮ ದೇಶದಲ್ಲಿ ರೈಲ್ವೆ ಪ್ರಯಾಣ ದರ ಕಡಿಮೆ ಇದೆ. ರೈಲ್ವೆಯ ಆರ್ಥಿಕ ಸ್ಥಿತಿ ಉತ್ತಮವಾಗಿದೆ. ಇದನ್ನು ಮತ್ತಷ್ಟು ಸುಧಾರಿಸಲು ಸರ್ಕಾರ ಕೆಲಸ ಮಾಡುತ್ತಿದೆ ಎಂದರು.

2005–2006 ರಿಂದ ರೈಲು ಅಪಘಾತಗಳು ಶೇಕಡ 90ರಷ್ಟು ಕಡಿಮೆಯಾಗಿದೆ. ರೈಲು ಅಪಘಾತಗಳನ್ನು ಮತ್ತಷ್ಟು ತಗ್ಗಿಸಲು ಸರ್ಕಾರ ಶ್ರಮಿಸುತ್ತಿದೆ. ದೇಶಾದ್ಯಂತ ಪ್ರಮುಖ ರೈಲು ನಿಲ್ದಾಣಗಳಲ್ಲಿ ಪ್ರಮುಖ ಸಂದರ್ಭಗಳಲ್ಲಿ ಜನಸಂದಣಿಯನ್ನು ನಿಯಂತ್ರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಚಿವರು ಮಾಹಿತಿ ನೀಡಿದರು.

ಪ್ರಸಕ್ತ ಹಣಕಾಸು ವರ್ಷದಲ್ಲಿ 1 ಸಾವಿರದ 400 ರೈಲ್ವೆ ಎಂಜಿನ್‌ಗಳನ್ನು ತಯಾರಿಸಲಾಗಿದೆ. ಇದೇ ವೇಳೆ ದೇಶದಲ್ಲಿ 10 ಸಾವಿರ ಎಂಜಿನ್‌ಗಳಲ್ಲಿ ಕವಚ್ ವ್ಯವಸ್ಥೆಯನ್ನು ಅಳವಡಿಸಲಾಗಿದೆ. ಇದರಿಂದ ಅಪಘಾತಗಳನ್ನು ತಡೆಯಬಹುದಾಗಿದೆ ಎಂದು ರೈಲ್ವೆ ಸಚಿವರು ತಿಳಿಸಿದರು.

*******************

ರಾಜ್ಯಸಭೆಯಲ್ಲಿಂದು 2025ರ ವಿನಿಯೋಗ ಮಸೂದೆ ಮತ್ತು 2025ರ ಮಣಿಪುರ ವಿನಿಯೋಗ ಮಸೂದೆಯನ್ನು ಪರಿಗಣನೆ ಮತ್ತು ಅಂಗೀಕಾರಕ್ಕೆ ಕೈಗೆತ್ತಿಕೊಳ್ಳಲಾಯಿತು.

ಚರ್ಚೆಯನ್ನು ಆರಂಭಿಸಿದ ಕಾಂಗ್ರೆಸ್‌ನ ಶಕ್ತಿಸಿನ್ಹಾ ಗೋಹಿಲ್, ಮಣಿಪುರಕ್ಕೆ ಬೆಂಬಲವನ್ನು ಖಚಿತಪಡಿಸಿಕೊಳ್ಳಲು ಎಲ್ಲ ಸದಸ್ಯರು ರಾಜಕೀಯ ಭಿನ್ನಾಭಿಪ್ರಾಯಗಳನ್ನು ಬದಿಗಿಡಬೇಕು. ಮಣಿಪುರದಲ್ಲಿ 60 ಸಾವಿರ ಜನರನ್ನು ಸ್ಥಳಾಂತರಿಸಲಾಗಿದೆ. ಸ್ಥಳಾಂತರ ಮತ್ತು ಪುನರ್ವಸತಿಗಾಗಿ ಹೆಚ್ಚಿನ ಹಣ ಹಂಚಿಕೆಯಾಗಬೇಕಿದೆ ಎಂದು ಹೇಳಿದರು.

*******************

ಸಂಸತ್‌ನ ಉಭಯ ಸದನಗಳಲ್ಲಿ ಸಚಿವರು ನೀಡಿದ ಎಲ್ಲಾ ಭರವಸೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸುತ್ತದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ.

ರಾಜ್ಯಸಭೆಯಲ್ಲಿಂದು ಪೂರಕ ಪ್ರಶ್ನೆಗೆ ಉತ್ತರಿಸಿದ ಅವರು, ಆನ್‌ಲೈನ್ ಭರವಸೆಗಳ ಮೇಲ್ವಿಚಾರಣಾ ವ್ಯವಸ್ಥೆಯು ಭರವಸೆಗಳನ್ನು ಈಡೇರಿಸುವುದನ್ನು ಖಚಿತಪಡಿಸಿಕೊಳ್ಳುವುದು ಸಹಾಯ ಮಾಡುತ್ತದೆ. ಭರವಸೆಗಳನ್ನು ಕಾಲಮಿತಿಯೊಳಗೆ ಪೂರೈಸುವುದನ್ನು ಖಚಿತಪಡಿಸಿಕೊಳ್ಳುವುದು ಇತ್ತೀಚೆಗೆ ಎಲ್ಲಾ ಸಚಿವರಿಗೆ ಪತ್ರ ಬರೆಯಲಾಗಿದೆ ಎಂದು ತಿಳಿಸಿದರು.

*******************

ಇಂಗ್ಲೆಂಡ್‌ನ ವೊಲ್ವರ್‌ಹ್ಯಾಂಪ್ಟನ್‌ನಲ್ಲಿ ಇಂದು ಆರಂಭವಾದ 2025ರ ಕಬಡ್ಡಿ ವಿಶ್ವಕಪ್ ಪಂದ್ಯಾವಳಿಯ ಮೊದಲ ಪಂದ್ಯದಲ್ಲಿ ಇಟಲಿ ತಂಡದ ವಿರುದ್ಧ 64–22 ಅಂಕಗಳಿಂದ ಭಾರತೀಯ ಪುರುಷರ ತಂಡ ಭರ್ಜರಿ ಜಯ ಸಾಧಿಸಿದೆ.

*******************

ಕೇಂದ್ರ ಮಾಜಿ ಸಚಿವ ಡಾ. ದೇಬೇಂದ್ರ ಪ್ರಧಾನ್ ನವದೆಹಲಿಯಲ್ಲಿ ಇಂದು ನಿಧನರಾದರು. ಅವರಿಗೆ 84 ವರ್ಷ ವಯಸ್ಸಾಗಿತ್ತು. ಡಾ. ಪ್ರಧಾನ್ ಅವರು ಅಟಲ್ ಬಿಹಾರಿ ವಾಜಪೇಯಿ ಸರ್ಕಾರದಲ್ಲಿ ಕೇಂದ್ರ ಭೂಸಾರಿಗೆ ಖಾತೆ ರಾಜ್ಯ ಸಚಿವರಾಗಿ ಸೇವೆ ಸಲ್ಲಿಸಿದ್ದರು. ಅವರು ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ಅವರ ತಂದೆ.

**********ಮುಕ್ತಾಯ*********